## ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ.

## ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ

**ಸಿ.ಸಿ.ನಂಃ 611/2013**

ಸಿ.ಡಬ್ಲ್ಯು. 4

ಪಿ.ಡಬ್ಲ್ಯು. 4

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಘವೇಂದ್ರ ಪಟಗಾರ |
| ತಂದೆಯ/ಗಂಡನ ಹೆಸರು | : | ಗಣಪತಿ ಪಟಗಾರ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸ್ತವ್ಯ | : | ಮಾಸೂರ ಕ್ರಾಸ್, ಕುಮಟಾ ತಾಲೂಕ |

**(ಇಂದು ದಿನಾಂಕಃ 09-10-2018 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)**

## ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

1. ನನಗೆ ಚಾ.ಸಾ. 5 ರವರ ಪರಿಚಯವಿದೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಪಂಚನಾಮೆ ಜರುಗಿಸಿಲ್ಲ. ಅಂದಾಜು 2 ವರ್ಷಗಳ ಹಿಂದೆ ನಾನು ವೈಯಕ್ತಿಕ ಕೆಲಸಕ್ಕೆ ಪೊಲೀಸ್ ಠಾಣೆಗೆ ಹೋಗಿದ್ದ ಸಮಯ ಪೊಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸದ್ರಿ ದಾಖಲೆ ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿ.ಪಿ. 3 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ಈಗ ನಿ.ಪಿ.3(ಬಿ) ಎಂದು ಗುರುತಿಸಲಾಯಿತು. ನಿ.ಪಿ.3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃ ಸ.ಸ.ಅ. ರವರಿಂದ ಃ-**

1. ದಿನಾಂಕ 26-12-2013 ರಂದು ಮುಂಜಾನೆ 11-00 ರಿಂದ 12-00 ಗಂಟೆಯವರೆಗೆ ನನ್ನ ಸಮಕ್ಷಮ ಪೊಲೀಸರು ನಿ.ಪಿ.3 ರಂತೆ ಪಂಚನಾಮೆಯನ್ನು ಜರುಗಿಸಿದ್ದು ಈ ಪ್ರಕರಣದ ಆರೋಪಿ ನಂ.1 ರವರು ನಡೆಸುತ್ತಿದ್ದ ಮನೆಯನ್ನು ಚಾ.ಸಾ.1 ರವರು ತೋರಿಸಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.3 ರಂತೆ ಪಂಚನಾಮೆಯನ್ನು ಜರುಗಿಸಿದ್ದರೂ ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಂ.ಡಿ.ಆರ್. ವಕೀಲರು ಗೈರು-ಹಾಜರಿದ್ದು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಹೇ. ಕೇ. ಸರಿ ಇದೆ.**

**ಜೆ.ಎಂ.ಎಫ್.ಸಿ. ಕುಮಟಾ.**